**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ನಂ. : 01/2025**

**ಚಾ.ಸಾಃ 1, ಫಿ್ರಾ.ಸಾಃ 1**

| | |
|---|---|
| ಸಾಕ್ಷಿದಾರನ ಹೆಸರು | ಇಸ್ಮಾಯಿಲ್ ಸವಣೂರು |
| ತಂದೆಯ ಹೆಸರು | ಅಬ್ದುಲ್ ಖಾದೀರ್ |
| ವಯಸ್ಸು | 55 ವರ್ಷಗಳು |
| ಉದ್ಯೋಗ | ಕೂಲಿ ಕೆಲಸ |
| ವಾಸ್ತವ್ಯ | ಮಗದೂಮ್ ಕಾಲೋನಿ, ಭಟ್ಕಳ ತಾಲೂಕು |

**ಸಾಕ್ಷಿಯನ್ನು ದಿನಾಂಕಃ 29-07-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ಮೃತ ಅಬ್ದುಲ್ ವಾಜಿದ್ ನಮ್ಮ ಸಂಬಂಧಿಕರು. ಅವರು ನಮ್ಮ ಮನೆಯ ಪಕ್ಕದಲ್ಲಿ ವಾಸವಾಗಿದ್ದಾರೆ.

ದಿನಾಂಕ 28-06-2024 ರಂದು ಸದರಿ ಅಬ್ದುಲ್ ವಾಜಿದ್ ಅವರು ತನ್ನ ಹೆಂಡತಿಯ ಜೊತೆ ಓಮಿನಿ ಕಾರಿನಲ್ಲಿ ಶಿವಮೊಗ್ಗ ಜಿಲ್ಲೆಯ ಶಿರಾಳಕೊಪ್ಪಕ್ಕೆ ಹೋಗಿ ಬರುವುದಾಗಿ ಹೇಳಿ ಹೋಗಿದ್ದರು. ಅದೇ ದಿನ ಸಂಜೆ 05-10 ರ ಸಮಯಕ್ಕೆ ಅವರ ಹೆಂಡತಿ ಗುಲ್ಸಾನ್ ಆರಾ ರವರು ನನಗೆ ಫೋನ್ ಮಾಡಿ ತಾವು ಗೇರುಸೊಪ್ಪಾ ಡ್ಯಾಮ್ ಹತ್ತಿರ ಹೋಗುತ್ತಿದ್ದಾಗ ಎದುರಿನಿಂದ ಒಂದು ಮಿನಿ ಬಸ್ ಬಲಭಾಗಕ್ಕೆ ಬಂದು ನಮ್ಮ ಕಾರಿಗೆ ಡಿಕ್ಕಿ ಮಾಡಿ ಅಪಘಾತ ಆಗಿರುವುದಾಗಿ ತಿಳಿಸಿದರು. ಗಂಡ ಹೆಂಡತಿ ಇಬ್ಬರಿಗೂ ಗಾಯಗಳಾಗಿದ್ದರು. ತಕ್ಷಣ ನಾನು ಹೊನ್ನಾವರಕ್ಕೆ ಬಂದೆ. ಆದರೆ ಆ ವೇಳೆಗೆ ವಾಜಿದ್ ರವರನ್ನು ಉಡುಪಿಗೆ ಹೆಚ್ಚಿನ ಚಿಕಿತ್ಸೆಗೆ ಕರೆದುಕೊಂಡು ಹೋಗಿರುವುದಾಗಿ ತಿಳಿಸಿದರು. ಆದರೆ ಅದೇ ದಿನ 06-30 ಕ್ಕೆ ಆತ ಮೃತಪಟ್ಟಿರುವುದಾಗಿ ಮಾಹಿತಿ ಬಂದಿರುತ್ತದೆ. ಆದ್ದರಿಂದ ನಾನು ಪೊಲೀಸ್ ಠಾಣೆಗೆ ಹೋಗಿ ಈ ಬಗ್ಗೆ ದೂರು ನೀಡಿದ್ದೇನೆ. ದೂರನ್ನು ನೋಡುತ್ತಿದ್ದು ನಿಪಿ-1 ಎಂದು, ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ದಿನಾಂಕ 29-06-2024 ರಂದು ಸಂಜೆ 06-00 ಗಂಟೆ ಸಮಯಕ್ಕೆ ಪೋಲಿಸರು ನನ್ನನ್ನು ಘಟನಾ ಸ್ಥಳಕ್ಕೆ ಕರೆಸಿದ್ದು ಚಾಸಾ-7 ರವರು ತೋರಿಸಿದ ಅಪಘಾತದ ಸ್ಥಳದಲ್ಲಿ ಪೋಲಿಸರು ಸ್ಥಳ ಪಂಚನಾಮೆ ಮಾಡಿ, ಸ್ಥಳದಲ್ಲಿ ಒಂದು ನಕಾಶೆ ತಯಾರಿಸಿರುತ್ತಾರೆ ಮತ್ತು ಸ್ಥಳದಲ್ಲಿ ಫೋಟೋ ತೆಗೆದಿರುತ್ತಾರೆ. ಸ್ಥಳ ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-2 ಎಂದು, ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಕಚ್ಚಾ ನಕಾಶೆಯನ್ನು ನೋಡುತ್ತಿದ್ದು ನಿಪಿ-3 ಎಂದು, ಸಾಕ್ಷಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಅಪಘಾತ ಸ್ಥಳದಲ್ಲಿ ಅಪಘಾತ ಪಡಿಸಿದ ಮಿನಿ ಬಸ್ಸು ಮತ್ತು ಓಮಿನಿ ಕಾರ್ ಸ್ಥಳದಲ್ಲೇ ಇದ್ದವು. ಅವುಗಳನ್ನು ಚಾಸಾ-7 ರವರು ಗುರುತಿಸಿರುತ್ತಾರೆ. ಆ ಕಾಲಕ್ಕೆ ಪೋಲೀಸರು ಫೋಟೋ ತೆಗೆಸಿರುತ್ತಾರೆ. ಸದರಿ ಫೋಟೋಗಳನ್ನು ನೋಡುತ್ತಿದ್ದು ಅವುಗಳನ್ನು ನಿಪಿ-4 ರಿಂದ 9 ಎಂದು ಗುರುತಿಸಲಾಯಿತು. ಮಿನಿ ಬಸ್ ಚಾಲಕನಿಂದ ಅಪಘಾತ ಆಗಿದೆ ಅಂತ ಗೊತ್ತಾಯಿತು.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಎಂ. ಎಲ್. ನಾಯ್ಕರಿಂದಃ</u>**

ಅಪಘಾತವನ್ನು ನಾನು ಕಣ್ಣಾರೆ ನೋಡಿಲ್ಲ. ಪಂಚನಾಮೆಗೆ ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆಯ ಕಾಲಕ್ಕೆ ಅಪಘಾತಕ್ಕೊಳಗಾಗಿದ್ದ ಬಸ್ಸು ಮತ್ತು ಕಾರನ್ನು ರಸ್ತೆಯ ಪಕ್ಕಕ್ಕೆ ನಿಲ್ಲಿಸಲಾಗಿತ್ತು. ಅಪಘಾತ ಆದ ಸ್ಥಳದಲ್ಲಿ ಯಾವುದೇ ಕುರುಹುಗಳು ಇರಲಿಲ್ಲ. ಮೃತ ನನ್ನ ಸಂಬಂಧಿಕರಾಗಿರುವುದರಿಂದ ಸುಳ್ಳು ದೂರು ನೀಡಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ ಇರುವುದಿಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**